66-67

UNIVERSITY OF MYSORE

Tel. Address: UNIREG
Telephone No. 677

MYSORE VISVAVIDYANILAYA
KARYA SOUDHA, CRAWFORD HALL,
POST BOX NO. 14,

No. R2 /65-66
Encls.

Mysore, Dated 30th August 1966.

FROM

THE REGISTRAR,
*University of Mysore,*
*MYSORE.*

To

Dr.M.N.Viswanathiah, M.Sc., P.hd.,
Professor of Geology and Chairman
of the Affiliation Commission for Science,
MANASAGANGOTRI,
MYSORE.

Sir,

Sub: Grant of Affiliation to Sri Siddaganga College of Science- Tumkur - in Pre-University P.C.B. group 66-67.

*****

Pursuant to the decision of the University Syndicate passed at its meeting held on 22-6-1966, I am directed to state that subject to the clear understanding that the college authorities would provide whatever additional facilities the University might suggest on the report of inspection of a one-man commission, necessary permission has been granted to start P.C.B. combination (Two sections of 64 students each) in addition to P.C.M. in the Pre-University course during the current academic year 66-67.

The University has deputed you to inspect and report about the facilities provided for teaching the P.C.B. group. I am to further request you that the date of inspection of the college by you may be intimated to the Principal of the college authorities direct, under intimation to this office.

As the inspection report has to go before the Academic Council which is scheduled to meet on 24-9-1966, the inspection of the college may kindly be taken up early.

Yours faithfully,

S.V. Keshava Hegde

REGISTRAR. 1/9/66

Copy with compliments to:-

1) The President, Sri Siddaganga Education Society, Siddaganga P.O. Tumkur for information in continuation of this letter of even number dated 27-6-66. He is requested to send Rs.250/- towards affiliation fee for introducing Biology.

2) The Principal, Sri Siddaganga College of Science, Tumkur.

3) Sri G.S.Shivanna, Principal, Siddaganga Institute of Technology, Tumkur.

4) The Bursar, University of Mysore, Mysore.

70-71

No. 2172 15-2-71

GOVERNMENT OF MYSORE

No. ED 11 UAC 71.

Mysore Government Secretariat,
Vidhana Soudha,
Bangalore, Dated the 29th January, 1971.

NOTIFICATION

In exercise of the powers conferred under Sub-Section (3) of Section 44-A of the Mysore University Act (Amendment) 1957, the Government of Mysore are pleased to sanction (i) Permanent Affiliation of Sree Siddaganga College of Science, Tumkur to the Mysore University, for teaching the following courses with effect from 1970-71.

Pre-University Course: History, Economics and Logic
History, Economics and Political Science
History, Economics and Commerce.

B.A. Degree (All the three years): Economics, Sociology (Majors), Political Science (Minor).

(ii) Continuance of affiliation for teaching the following courses for the year 1970-71:

Pre-University Course:

Physics, Chemistry and Mathematics (3 sections of 72 students each);
Physics, Chemistry and Biology (2 sections of 72 students each);

B.A. Degree (First Year):

History, Economics (Majors), Sociology (Minor);
History, Economics (Majors), Political Science (Minor);
Kannada, Sociology (Majors), Political Science (Minor);
Economics, Political Science (Majors), Sociology (Minor).

B.Sc. Degree (All the Three Years):

Physics, Mathematics (Majors), Chemistry (Minor) - One Section of 64 students in each class;
Physics, Chemistry (Majors), Mathematics (Minor) - One Section of 32 students in each class;

and (iii) fresh affiliation for teaching the following courses for the year 1970-71.

B.Com. Degree (First Year):
B.Sc. Degree (First Year):

Botany, Zoology (Majors), Chemistry (Minor) - One Section of 48 students.

subject to the conditions laid down by the Affiliation Commissio-n and the Mysore University.

By Order and in the name of the
Governor of Mysore.

Sd/-:
( S.V. Kashi Pathy )
Under Secretary to Government,
Education & Youth Services Department.

SREE SIDDAGANGA COLLEGE OF ARTS, SCIENCE & COMMERCE
No. ........
Date ........
TUMKUR-2

To: The Compiler, Mysore Gazette - 2 copies with a request to publish the Notification in the next issue of the Gazette;

- - - - - - - - - - - - - - - - - - - - - - - - - - - - - -

University of Mysore

"Crawford Hall",
Mysore-5, Dated : 8-2-1971.

Memo No:R2-507/69-70.

Copy of the above is forwarded with compliments to :-

(1) The Principal, Sree Siddaganga College of Science, Tumkur;

-PTO-

# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ವಿಶ್ವವಿದ್ಯಾನಿಲಯ ಘಟಕ ಕಾಲೇಜು ಆವರಣ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ : ತುವಿ : ಶೈಕ್ಷಣಿಕ : 2010-11 - 361 ದಿನಾಂಕ : 13.08.2010

## ಅಧಿಸೂಚನೆ

ವಿಷಯ : 2010-2011ನೇ ಶೈಕ್ಷಣಿಕ ಸಾಲಿಗೆ ತುಮಕೂರಿನ ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜಿಗೆ ಹೊಸ ಕೋರ್ಸ್ ಸಂಯೋಜನೆ ಮಂಜೂರಾತಿ ಕುರಿತು.

ಉಲ್ಲೇಖ : 1. ಸರ್ಕಾರದ ಪತ್ರ ಕ್ರಮಾಂಕ : ಇಡಿ : 56: ಯುಐಐ : 2010 ದಿನಾಂಕ : 06.07.2010.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ : 13.08.2010.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ - 2000 ರ 58ನೇ ಪ್ರಕರಣದ (11) ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ **ತುಮಕೂರಿನ ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜಿಗೆ** 2010-2011ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಈ ಕೆಳಕಂಡ ಹೊಸ ಕೋರ್ಸ್ ಹಾಗೂ ಅದಕ್ಕೆ ನಿಗದಿಪಡಿಸಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಈ ಕೆಳಕಂಡ ಷರತ್ತುಗೊಳಪಟ್ಟು ತಾತ್ಕಾಲಿಕ ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸ್ | ವಿಷಯ ಸಮೂಹ / ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಕಾಂ. | ವಿಶ್ವವಿದ್ಯಾನಿಲಯದ ನಿಯಮದಂತೆ | 60 (ಅರವತ್ತು) |

**ಷರತ್ತುಗಳು :**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸ್‌ಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನ-ರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು.
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು.
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು / ಆಡಳಿತ ಮಂಡಳಿಯು ಶೇ.50% ರಷ್ಟು ವಿಶ್ವವಿದ್ಯಾನಿಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು ; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ : 13.08.1997 ರಂದು ವಿಶಾಖ V/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟುಮಾಡುವುದಾಗಲಿ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡುವುದಾಗಲಿ ಮಾಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ / ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು, ಮತ್ತು ಆ ವ್ಯಕ್ತಿ / ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು / ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

ಪು.ತಿ.ನೋ.

SIDDAGANGA COLLEGE OF ARTS, SCIENCE & COMMERCE
No. 186/...
Date 19/8/10
TUMKUR-2

1997-98

ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ, ಬೆಂಗಳೂರು

ಕ್ರಮಾಂಕ : ಇಡಿ 352 ಯುಜಿಸಿ 97

ದಿನಾಂಕ 7-10-97.

ಇಂದ,
ಕಾರ್ಯದರ್ಶಿ,
ಶಿಕ್ಷಣ ಇಲಾಖೆ,
ಕರ್ನಾಟಕ ಸರ್ಕಾರ, ಬೆಂಗಳೂರು-560 001

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು — 560 056.

ಮಾನ್ಯರೇ,

ವಿಷಯ: ತುಮಕೂರಿನ ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ಹೊಸ ಕೋರ್ಸುಗಳಿಗೆ ಸಂಯೋಜನೆ.

ಉಲ್ಲೇಖ: ದಿನಾಂಕ 4-8-97, ಸಂ:ಎಸಿಎ 3 ಹೊಸ ಕೋರ್ಸು 97-98 ರ ನಿಮ್ಮ ಪತ್ರ.

---

1) ತುಮಕೂರಿನ ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಪ್ರಸಕ್ತ 1997-98 ನೇ ಸಾಲಿನಿಂದ ಈ ಕೆಳಕಂಡ ಕೋರ್ಸುಗಳನ್ನು ಪ್ರಾರಂಭಿಸಲು ಸಂಯೋಜನೆಗಾಗಿ ಸ್ವೀಕೃತವಾಗಿದ್ದ ಪ್ರಸ್ತಾವನೆಯನ್ನು ನಿಮ್ಮ ವಿಶ್ವವಿದ್ಯಾಲಯದ ಸ್ಥಳೀಯ ಪರಿಶೀಲನಾ ಸಮಿತಿ ನೀಡಿದ ವರದಿಯನ್ನು ಶೈಕ್ಷಣಿಕ ಮಂಡಳಿ ಹಾಗೂ ಸಿಂಡಿಕೇಟುಗಳು ಪರಿಶೀಲಿಸಿ ತೆಗೆದುಕೊಂಡ ನಿರ್ಣಯದ ಬೆಳಕಿನಲ್ಲಿ ಪರಿಶೀಲಿಸಲಾಗಿದೆ.

| ಕ್ರ.ಸಂ | ಕೋರ್ಸ್ | ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1. | ಬಿ.ಎ. | ಇತಿಹಾಸ, ಅರ್ಥಶಾಸ್ತ್ರ, ಇಂಗ್ಲೀಷ | 30 (ಮೂವತ್ತು) |
| 2. | ಬಿ.ಬಿ.ಎಂ. | | — |

2) ನಿಮ್ಮ ಶಿಫಾರಸ್ಸಿನೊಂದಿಗೆ ಸಹಮತಿಸುತ್ತಾ, ಮೇಲ್ಕಂಡ ಕಾಲೇಜಿನಲ್ಲಿ ಕೆಳಗೆ ನಮೂದಿಸಿರುವ ಕೋರ್ಸುಗಳನ್ನು ಅದರ ಮುಂದೆ ಸೂಚಿಸಿರುವ ವಿದ್ಯಾರ್ಥಿಗಳ ಪ್ರಮಾಣದೊಂದಿಗೆ ಸದರಿ ಕೋರ್ಸುಗಳಿಗೆ ಯಾವುದೇ ಕಾಲಕ್ಕೂ ಸರ್ಕಾರದ ಅನುದಾನ ನೀಡುವುದಿಲ್ಲವೆಂಬ ಷರತ್ತಿಗೊಳಪಟ್ಟು ಸಂಯೋಜನೆಯನ್ನು ಪ್ರಸಕ್ತ 1997-98 ನೇ ಸಾಲಿನಿಂದ ಜಾರಿಗೆ ಬರುವಂತೆ 1976 ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದ 53 ನೇ ಪ್ರಕರಣದ (5)ನೇ ಉಪ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ.

| ಕ್ರ.ಸಂ | ಕೋರ್ಸ್ | ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1. | ಬಿ.ಎ., | ಇತಿಹಾಸ, ಅರ್ಥಶಾಸ್ತ್ರ, ಇಂಗ್ಲೀಷ | 30 (ಮೂವತ್ತು) |

3) ಬಿ.ಬಿ.ಎಂ. ಕೋರ್ಸಿಗೆ ಶೈಕ್ಷಣಿಕ ಮಂಡಳಿ ಮತ್ತು ಸಿಂಡಿಕೇಟುಗಳ ಶಿಫಾರಸ್ಸು ಇಲ್ಲದಿರುವುದರಿಂದ ಹಾಗೂ ಪೂರ್ಣಕಾಲಿಕ ಶಿಕ್ಷಕರನ್ನು ನೇಮಿಸಬೇಕಾಗಿರುವುದರಿಂದ ಮತ್ತು ಗ್ರಂಥಾಲಯವನ್ನು ಅಭಿವೃದ್ಧಿಪಡಿಸಬೇಕಾಗಿರುವುದರಿಂದ ಸದರಿ ಕೋರ್ಸಿಗೆ ಸಂಯೋಜನೆಯನ್ನು ನಿರಾಕರಿಸುವಂತೆ ಶಿಫಾರಸ್ಸು ಮಾಡಲಾಗಿದೆ.

ತಮ್ಮ ನಂಬುಗೆಯ,

(ಪಿ.ಎಸ್.ಕುಲಕರ್ಣಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ)

SIDDAGANGA COLLEGE OF ARTS, SCIENCE & COMMERCE
No 261
Date 8-11-97
TUMKUR-2

Sri JK
File

ಪ್ರತಿ ಇವರಿಗೆ:
1) ಕಾಲೇಜು ಶಿಕ್ಷಣದ ನಿರ್ದೇಶಕರು, ಬೆಂಗಳೂರು — 560 001.
2) ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ),
3) ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು,
ತುಮಕೂರು — 572 102.

Ru
8/11/97

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 55 ಯುಟಿಟಿ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 26-6-2009

ಇಂದ
ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು.

ಮಾನ್ಯರೆ,

ವಿಷಯ:- ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು, ತುಮಕೂರು. ಹೊಸ ಕೋರ್ಸುಗಳ ಪ್ರಾರಂಭಕ್ಕೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ: ತುವಿ/ಶೈಸಂ/407(6)/2009-10, ದಿ:15-5-2009.

---

ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು, ತುಮಕೂರು, ಈ ಸಂಸ್ಥೆಯಲ್ಲಿ ಹೊಸದಾಗಿ ಬಿ.ಎ. ಮತ್ತು ಬಿ.ಸಿ.ಎ. ಕೋರ್ಸುಗಳನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ತುಮಕೂರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ತುಮಕೂರು ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು, ತುಮಕೂರು, ಈ ಸಂಸ್ಥೆಯಲ್ಲಿ ಹೊಸದಾಗಿ ಬಿ.ಎ. ಮತ್ತು ಬಿ.ಸಿ.ಎ. ಕೋರ್ಸುಗಳನ್ನು ತಲಾ 50 (ಐವತ್ತು) ವಿದ್ಯಾರ್ಥಿ ಪ್ರಮಾಣದೊಂದಿಗೆ 2009-10ನೇ ಶೈಕ್ಷಣಿಕ ಸಾಲಿನಿಂದ ಈ ಕೆಳಗಿನ ಷರತ್ತುಗಳೊಂದಿಗೆ ಪ್ರಾರಂಭಿಸಲು ಸರ್ಕಾರದ ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಉಪನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

No 126/09-10
Date 7-7-09

...2...

21-22

UNIVERSITY OF MYSORE

Mysore Visvavidyanilaya Karya Soudha,
(Crawford Hall)
MYSORE-5.

No.AFF- 287/71-72
Encl: Three

Dated 12th November, 1971.

From

The Registrar,
University of Mysore.

To

The Secretary to the Government of Mysore,
Education and Youth Services Department,
Vidhana Soudha, BANGALORE-1.

Sir,

Sub: Grant of affiliation to Sree Siddaganga College of Arts, Science & Commerce, Tumkur for 1971-72.

* * *

I am directed to state that the Principal Sree Siddaganga College of Arts, Science & Commerce, Tumkur requested this University in letter No. 2500/70-71 dated 5-10-1970 for the grant of affiliation to the above College for the year 1971-72 since the one sanctioned by the Government in Notification No. ED 11 UAC 71 dated 29-1-1971 expired for 1970-71.

The Affiliation Commission in Science constituted by the University Syndicate inspected the College on 19-3-1971 and gave its report.

The Academic Council and the University Syndicate at its meeting held on 16-8-1971 and 18-9-1971 respectively considered the report and agreed with the recommendation made thereon.

Since the report on the inspection of several colleges were under process the Academic Council at its meeting held on 16-8-1971 by a resolution empowered the Vice-Chancellor to take appropriate action on the reports of the Affiliation Commission and make recommendation to Government. The Syndicate at its meeting held on 18-9-1971 endorsed the resolution of the Academic Council.

The Affiliation Commission in Commerce inspected the College on 7-10-1971 ~~respectively~~

contd......

1107
19/11/71

## ಕರ್ನಾಟಕ ಸರ್ಕಾರ

ಇ- ಸಂ: ಇಡಿ 32 ಯುಟಿಟಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:05.01.2022

**ಇಂದ:**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು

**ಇವರಿಗೆ:**
ಕುಲಸಚಿವರು,
ತುಮಕೂರು ವಿಶ್ವವಿದ್ಯಾಲಯ, ತುಮಕೂರು.

ಮಾನ್ಯರೇ,

ವಿಷಯ: ತುಮಕೂರು ವಿಶ್ವವಿದ್ಯಾಲಯದ ವ್ಯಾಪ್ತಿಯ ಶ್ರೀ ಸಿದ್ಧಗಂಗಾ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಇಲ್ಲಿ ಅಸ್ತಿತ್ವದಲ್ಲಿರುವ ವಿವಿಧ ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು 2021-22ನೇ ಸಾಲಿನಿಂದ ನವೀಕರಿಸುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021, ದಿನಾಂಕ:12.02.2021
2. ತಮ್ಮ ಪತ್ರ ಸಂಖ್ಯೆ:ತುವಿ/ಕಾ.ಅ.ಪ-ಸಂಯೋಜನೆ-01/ 2021-22/2752, ದಿನಾಂಕ:19.11.2021

*****

ಶ್ರೀ ಸಿದ್ಧಗಂಗಾ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಬಿ.ಹೆಚ್. ರಸ್ತೆ, ತುಮಕೂರು-572 102 ಇಲ್ಲಿ ಅಸ್ತಿತ್ವದಲ್ಲಿರುವ ವಿವಿಧ ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು 2021-22ನೇ ಸಾಲಿನಿಂದ ನವೀಕರಿಸುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ ಪ್ರಕರಣ 59(11) ಜೊತೆಯಲ್ಲಿ ಓದಲಾದ 62(1))ರಡಿ ಅವಶ್ಯಕವಾದ ಸರ್ಕಾರದ ಶಿಫಾರಸ್ಸು ಕೋರಿ , ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ, ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿರುವ ಪ್ರಪತ್ರಗಳಲ್ಲಿ ಉಲ್ಲೇಖ(2)ರ ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ತುಮಕೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯು ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ

--2

COLLEGE OF ARTS, SCIENCE & COMMERCE
No 725/2021-22
Date 06.01.2022
TUMKUR-2

Scanned with OKEN Scanner

ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಪೂರ್ವಪ್ರಸ್ತಾಪಿತ ಶಾಶ್ವತ ಸಂಯೋಜನೆ ನವೀಕರಣ ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ತತ್ಪರಿಣಾಮವಾಗಿ, ಶ್ರೀ ಸಿದ್ಧಗಂಗಾ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಬಿ.ಹೆಚ್. ರಸ್ತೆ, ತುಮಕೂರು-572 102 ಇಲ್ಲಿ ಅಸ್ತಿತ್ವದಲ್ಲಿರುವ ಈ ಕೆಳಕಂಡ ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು ಅವುಗಳ ಮುಂದೆ ತೋರಿಸಿರುವ ವಿದ್ಯಾರ್ಥಿ ಪ್ರಮಾಣಗಳಿಗೆ ಅನ್ವಯಿಸುವಂತೆ 2021-22ನೇ ಸಾಲಿನಿಂದ 5 ವರ್ಷಗಳ ಅವಧಿಗೆ ನವೀಕರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ ಪ್ರಕರಣ 59(11) ಜೊತೆಯಲ್ಲಿ ಓದಲಾದ 62(1)ರನ್ವಯ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ವ್ಯಾಸಂಗಕ್ರಮ | ವಿಷಯಸಮೂಹ | ವಿದ್ಯಾರ್ಥಿಪ್ರಮಾಣ |
|---|---|---|
| ಬಿ.ಎ | HEP | 100 |
| | HSK | 100 |
| | HES | 60 |
| | HEEng | 60 |
| | JrEngPsy | 50 |
| ಬಿ.ಎಸ್ಸಿ | PCM | 90 |
| | PMCs | 45 |
| | CBZ | 72 |
| | CZBt | 30 |
| ಬಿ.ಕಾಂ | ವಿ.ವಿ.ಪರಿನಿಯಮಾವಳಿಗಳಂತೆ | 150 |

ಶ್ರೀ ಸಿದ್ಧಗಂಗಾ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಪೂರ್ವಪ್ರಸ್ತಾಪಿತ ಶಾಶ್ವತ ಸಂಯೋಜನೆ ನವೀಕರಣವನ್ನು ಮಂಜೂರು ಮಾಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ, ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

--3

Scanned with OKEN Scanner

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ

(ಮಹೇಶ್ ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

ಪ್ರತಿ:

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
3. ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಬಿ.ಹೆಚ್. ರಸ್ತೆ, ತುಮಕೂರು-572 102

Scanned with OKEN Scanner

# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572103

ಸಂಖ್ಯೆ :ತುವಿ: ಕಾ.ಅ.ಪ:ಸಂ:2024-25/ 2639 ದಿನಾಂಕ: 28.10.2024

## ಅಧಿಸೂಚನೆ

**ವಿಷಯ: 2024-25ನೇ ಶೈಕ್ಷಣಿಕ ಸಾಲಿಗೆ ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ತುಮಕೂರು, ಈ ಕಾಲೇಜಿಗೆ ಸಂಯೋಜನೆ ನವೀಕರಿಸುವ ಕುರಿತು.**

ಉಲ್ಲೇಖ:
1) ದಿನಾಂಕ:15.06.2024 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ
2) ದಿನಾಂಕ:15.06.2024 ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ
3) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:25.10.2024

* * * *

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ – 2000ರ 59ನೇ ಪ್ರಕರಣದ (17)ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ತುಮಕೂರು ವಿಶ್ವವಿದ್ಯಾನಿಲಯವು 2024-25ನೇ ಶೈಕ್ಷಣಿಕ ಸಾಲಿಗೆ **ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ತುಮಕೂರು** ಇಲ್ಲಿ ನಡೆಸುತ್ತಿರುವ ಕೋರ್ಸುಗಳಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರೆಸಲು ಮಂಜೂರಾತಿ ನೀಡಲಾಗಿದೆ.

| ಕೋರ್ಸು | ವಿಷಯ ಸಮೂಹ / ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಸಿ.ಎ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 60 (ಅರವತ್ತು) |
| ಬಿ.ಕಾಂ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 100 (ಒಂದುನೂರು) |
| ಬಿ.ಬಿ.ಎ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 40 (ನಲವತ್ತು) |
| ಎಂ.ಕಾಂ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 60 (ಅರವತ್ತು) |
| ಭಾಷೆಗಳು : ಕನ್ನಡ, ಇಂಗ್ಲಿಷ್, ಹಿಂದಿ, ತೆಲುಗು ಮತ್ತು ಉರ್ದು | | |
| As per LIC Secured Weighted Score of the College is – 78.60 % | | |

**ಷರತ್ತುಗಳು:**

1. ಕಾಲೇಜಿನ ಪ್ರಾಂಶುಪಾಲರ ಹಾಗೂ ಸ್ನಾತಕೋತ್ತರ ಕೋರ್ಸುಗಳ ಅಧ್ಯಾಪಕರುಗಳ ನೇಮಕಾತಿಯಲ್ಲಿ ವಿಶ್ವವಿದ್ಯಾನಿಲಯದ ಧನ ಸಹಾಯ ಆಯೋಗದ (ಯು.ಜಿ.ಸಿ.) ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.
2. ವಿಶ್ವವಿದ್ಯಾನಿಲಯದ ಪ್ರತಿನಿಧಿಯನ್ನೊಳಗೊಂಡಂತೆ ಗೌರ್ನಿಂಗ್ ಕೌನ್ಸಿಲ್ ಸಭೆಯನ್ನು ಕಡ್ಡಾಯವಾಗಿ ನಡೆಸುವುದು ಹಾಗೂ ಸಭೆಯ ನಡಾವಳಿಯನ್ನು ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸುವುದು.
3. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಪು.ತಿ.ನೋ.

Scanned with OKEN Scanner

4. ವಿಶ್ವವಿದ್ಯಾನಿಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗದಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ಕೋರ್ಸುಗಳಿಗೆ ನಿಗದಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು. ಹೆಚ್ಚುವರಿ ಪ್ರಮಾಣವನ್ನು ಯಾವುದೇ ಕಾರಣಕ್ಕೂ ಮಾಡಬಾರದು.
5. ಯಾವುದೇ ಕೋರ್ಸಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ಹೆಚ್ಚುವರಿ ವಿಭಾಗಗಳನ್ನು ತೆರೆಯಬಾರದು.
6. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
7. ಕಾಲೇಜಿನ ಪ್ರಾಂಶುಪಾಲರು/ ಆಡಳಿತ ಮಂಡಳಿಯು ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ / ಪರಿನಿಯಮಾವಳಿ ಮತ್ತು ಆದೇಶಗಳನ್ನು ಪಾಲಿಸತಕ್ಕದ್ದು.
8. ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ದರದಲ್ಲಿ ವಿದ್ಯಾರ್ಥಿಗಳಿಂದ ಪಡೆದುಕೊಳ್ಳತಕ್ಕದ್ದು.
9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಸಲುವಾಗಿ ಕಾಲೇಜಿನಲ್ಲಿ ಶೈಕ್ಷಣಿಕ ಕ್ರಮವನ್ನು ಉತ್ತಮ ಪಡಿಸತಕ್ಕದ್ದು.
10. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು / ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
11. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

No. 241
Date 19-11-2024
Tumkur

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಬಿ.ಹೆಚ್. ರಸ್ತೆ ತುಮಕೂರು -572102**

**ಪ್ರತಿಗಳು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560001.
2) ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560001.
3) ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4) ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5) ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6) ಕಛೇರಿ ಪ್ರತಿ.

Scanned with OKEN Scanner

# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572103


**ಸಂಖ್ಯೆ :ತುವಿ: ಕಾ.ಅ.ಪ:ಸಂ:2024-25/ ೨೬೪೦** **ದಿನಾಂಕ: 28.10.2024**

## ಅಧಿಸೂಚನೆ

**ವಿಷಯ: 2024-25ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ತುಮಕೂರು ಈ ಕಾಲೇಜಿಗೆ ಪ್ರವೇಶಮಿತಿ ಹೆಚ್ಚಳಕ್ಕೆ ಸಂಯೋಜನೆ ಮಂಜೂರಾತಿ ನೀಡುವ ಕುರಿತು.**

ಉಲ್ಲೇಖ:
1) ದಿನಾಂಕ:15.06.2024 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ
2) ದಿನಾಂಕ:15.06.2024 ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ
3) ಸರ್ಕಾರದ ನಡವಳಿಗಳ ಆದೇಶ ಸಂಖ್ಯೆ: ಇಡಿ 25 ಯುಟಿಟಿ 2024, ಬೆಂಗಳೂರು, ದಿನಾಂಕ: 03.10.2024
4) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 25.10.2024

****

**ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ತುಮಕೂರು** ಈ ಕಾಲೇಜಿಗೆ ಉಲ್ಲೇಖ (03)ರ ಸರ್ಕಾರದ ಆದೇಶದಲ್ಲಿ ಬಿ.ಬಿ.ಎ. ಮತ್ತು ಬಿ.ಸಿ.ಎ. ಕೋರ್ಸುಗಳಿಗೆ ಪ್ರವೇಶಮಿತಿ ಹೆಚ್ಚಳಕ್ಕೆ ಅನುಮತಿ ನೀಡಿರುತ್ತದೆ. ಬಿ.ಕಾಂ. ಕೋರ್ಸಿನ ಪ್ರವೇಶಮಿತಿ ಹೆಚ್ಚಳಕ್ಕೆ ಉಲ್ಲೇಖ (01) ಮತ್ತು (02)ರಲ್ಲಿ ಅನುಮತಿ ದೊರೆತಿರುತ್ತದೆ. ಈ ಸಂಬಂಧ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ-2000ರ 59ನೇ ಪ್ರಕರಣದ (18)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ **ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ತುಮಕೂರು** ಈ ಕಾಲೇಜಿಗೆ 2024-25ನೇ ಶೈಕ್ಷಣಿಕ ಸಾಲಿನಿಂದ ಈ ಕೆಳಕಂಡ ಕೋರ್ಸುಗಳಿಗೆ ನಮೂದಿಸಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರವೇಶಮಿತಿ ಹೆಚ್ಚಳದ ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸ್ | ವಿಷಯ ಸಮೂಹ / ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಬಿ.ಎ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 10 (ಹತ್ತು) |
| ಬಿ.ಸಿ.ಎ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 30 (ಮೂವತ್ತು) |
| ಬಿ.ಕಾಂ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 20 (ಇಪ್ಪತ್ತು) |
| As per LIC Secured Weighted Score of the College is – 78.60 % | | |

**ಷರತ್ತುಗಳು:**

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನ-ರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು.
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು:
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.
4) ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು / ಆಡಳಿತ ಮಂಡಳಿಯು ಶೇ.50% ರಷ್ಟು ವಿಶ್ವವಿದ್ಯಾನಿಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ -

ಪು.ತಿ.ನೋ.

Scanned with OKEN Scanner

ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಶುಲ್ಕವನ್ನು

7) ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

8) ದಿನಾಂಕ: 13.08.1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟುಮಾಡುವುದಾಗಲಿ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡುವುದಾಗಲಿ ಮಾಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ / ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು, ಮತ್ತು ಆ ವ್ಯಕ್ತಿ/ ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

9) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಕೋರ್ಸನ್ನು ಉತ್ತಮವಾಗಿ ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ ಆಡಳಿತ ಮಂಡಳಿಯು ವಿದ್ಯಾರ್ಥಿ/ ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

10) ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾನಿಲಯವು ಅನುಮೋದಿಸುವವರೆಗೆ ಅಥವಾ 06 ತಿಂಗಳ ಅವಧಿಗೆ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ, ಮೀರಿ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ.

11) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ / ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು. ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

12) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

13) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

14) ಶೈಕ್ಷಣಿಕ/ ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ನಿಗದಿ ಪಡಿಸಲಾದ ಸೂಚ್ಯಾಂಕಗಳ ಪೈಕಿ ಪಾಲನೆಯಾಗದ ಸೂಚ್ಯಾಂಕಗಳನ್ನು 06 ತಿಂಗಳ ಒಳಗಾಗಿ ಪೂರೈಸತಕ್ಕದ್ದು.

15) ಸರ್ಕಾರದ ಆದೇಶ ಸಂಖ್ಯೆ ಇಡಿ 29 ಯುಎನ್ಇ 2021 ದಿನಾಂಕ: 12.02.2021ರ ಮತ್ತು ಇಡಿ 218 ಯುಎನ್ಇ 2020, ದಿನಾಂಕ: 24.02.2022 ರಲ್ಲಿನ ಷರತ್ತುಗಳನ್ನು (06) ತಿಂಗಳೊಳಗೆ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

No. 241
Date 19-11-2024

ಗೆ,

**ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಬಿ.ಹೆಚ್. ರಸ್ತೆ, ತುಮಕೂರು -572102**

**ಪ್ರತಿಗಳು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560001.
2) ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560001.
3) ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4) ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5) ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6) ಕಛೇರಿ ಪ್ರತಿ

Scanned with OKEN Scanner